ಕರ್ನಾಟಕ ಸರ್ಕಾರ

ಸೆಪ್ಟೆಂಬರ್ 1, 2017

# ಬಕ್ರೀದ್ : ರಾಜ್ಯದ ಜನತೆಗೆ ಮುಖ್ಯಮಂತ್ರಿ ಶುಭಾಶಯ




**ಬೆಂಗಳೂರು, ಸೆಪ್ಟೆಂಬರ್ 1:**

ತ್ಯಾಗದ ಹಬ್ಬ ಎಂದೇ ಎಲ್ಲೆಡೆ ಜನಪ್ರಿಯವಾಗಿರುವ ಬಕ್ರೀದ್ ಅಥವಾ ಈದ್-ಅಲ್-ಆಝಾ ಸುಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯದ ಜನತೆಗೆ, ವಿಶೇಷವಾಗಿ ರಾಜ್ಯದ ಎಲ್ಲಾ ಮುಸಲ್ಮಾನ ಬಾಂಧವರಿಗೆ ಶುಭ ಹಾರೈಸಿದ್ದಾರೆ.

ನಿಷ್ಕಲ್ಮಶ ಭಕ್ತಿಗೆ ಅಲ್ಲಾಹ್‌ನ ಅನುಗ್ರಹ ಇದ್ದೇ ಇರುತ್ತದೆ ಎಂಬುದನ್ನು ಬಲವಾಗಿ ಪ್ರತಿಪಾದಿಸುವುದರ ಸಂಕೇತವಾಗಿರುವ ಬಕ್ರೀದ್ ಹಬ್ಬವು ತ್ಯಾಗದ ಶ್ರೇಷ್ಠತೆಯನ್ನು ಸಾಬೀತುಪಡಿಸುತ್ತದೆ. ಬಹುಶಃ ಈ ಹಿನ್ನೆಲೆಯಲ್ಲಿಯೇ, ಬಕ್ರೀದ್ ಹಬ್ಬದ ಸುಸಂದರ್ಭವನ್ನು ಪವಿತ್ರ ಹಜ್ ಯಾತ್ರೆಗೆ ಅತ್ಯುತ್ತಮ ಕಾಲ ಎಂದು ಬಣ್ಣಿಸುತ್ತಾರೆ.

ಬಂಧು-ಮಿತ್ರರು, ನೆರೆ-ಹೊರೆಯವರು ಹಾಗೂ ಬಡವರು-ಕಡುಬಡವರೊಂದಿಗೆ ಹಬ್ಬದೂಟವನ್ನು ಸವಿದು ಸಂಭ್ರಮಿಸಲು ವಿಶೇಷ ವೇದಿಕೆಯಾಗಲಿರುವ ಬಕ್ರೀದ್ ಹಬ್ಬವು ಬಡವ-ಬಲ್ಲಿದ ಎಂಬ ಬೇಧ-ಭಾವವಿಲ್ಲದೆ ಎಲ್ಲರೊಂದಿಗೆ ಸುಮಧುರ ಬಾಂಧವ್ಯವನ್ನು ಬೆಸೆಯಲು ಮಾನವೀಯ ಸ್ಪರ್ಶ ಕಲ್ಪಿಸುತ್ತದೆ.

ಬಕ್ರೀದ್ ಹಬ್ಬವು ನಮ್ಮೆಲ್ಲರನ್ನೂ ಒಗ್ಗೂಡಿಸಲಿ. ಕೋಮು ಸೌಹಾರ್ದತೆ ಮೂಡಿಸಲು ಪ್ರೇರಣೆ ಹಾಗೂ ಸ್ಫೂರ್ತಿಯನ್ನು ನೀಡುವ ಮೂಲಕ ಸಮೃದ್ಧ ಕರ್ನಾಟಕವನ್ನು ರೂಪಿಸಲು

**ಹಾಗೂ ಬಲಿಷ್ಠ ಭಾರತವನ್ನು ನಿರ್ಮಿಸಲು ಬಕ್ರೀದ್‌ನ ಸಡಗರ ಮತ್ತು ಸಂಭ್ರಮ ನಮ್ಮೆಲ್ಲರಿಗೂ ಶಕ್ತಿಯನ್ನೀಯಲಿ ಎಂದು ಸಿದ್ದರಾಮಯ್ಯ ಅವರು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.**

***************

**ಡಿ ಪಿ ಎಂ**